ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ	:	631(732)
ಸದಸ್ಯರ ಹೆಸರು	:	ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	20-12-2021.
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿ ಆಗಿದ್ದು ಯಾವಾಗ; ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ; ಪ್ರಸ್ತುತ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಎಷ್ಟು ಹುದ್ದೆಗಳಿಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ:	ಸರ್ಕಾರಿ ಪ್ರೌಢಶಾಲೆಗಳಲ್ಲಿ 2007-2008ನೇ ಸಾಲಿನಲ್ಲಿ 522 ಚಿತ್ರಕಲಾ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. ಪ್ರಸ್ತುತ ಒಟ್ಟು 339 ಚಿತ್ರಕಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.
ಆ)	ಚಿತ್ರಕಲಾ ಶಿಕ್ಷಕರಿಗೆ ಈ ಹಿಂದೆ ಯಾವಾಗ ಬಡ್ತಿ ನೀಡಲಾಗಿತ್ತು; ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗಿತ್ತು; ಪ್ರಸ್ತುತ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗುವುದು; (ವಿಭಾಗವಾರು ಮಾಹಿತಿ ನೀಡುವುದು) ಇಲ್ಲವಾದಲ್ಲಿ, ಬಡ್ತಿ ನೀಡಲು ಇರುವ ಸಮಸ್ಯೆಗಳೇನು; ಈ ಸಮಸ್ಯೆಗಳನ್ನು ಪರಿಹರಿಸಿ ಬಡ್ತಿ ನೀಡಲಾಗುವುದೇ?	ದಿನಾಂಕ:11.02.2008ರಲ್ಲಿಸರ್ಕಾರಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರುಗಳಿಗೆ ಗ್ರೂಪ್ "ಸಿ" ವೃಂದದ ವಿಭಾಗೀಯ ಹಿರಿಯ ವಿಷಯ ಪರಿವೀಕ್ಷಕರು (ಚಿತ್ರಕಲೆ), ಕಲಾವಿದರು, ಕಲಾ ಬೋಧಕರು ವೃಂದದ ಒಟ್ಟು 9 ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ. ಸರ್ಕಾರಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರಿಗೆ ಗ್ರೂಪ್ ಬಿ ವೃಂದದ ವಿಭಾಗೀಯ ಹಿರಿಯ ವಿಷಯ ಪರಿವೀಕ್ಷಕರು(ಚಿತ್ರಕಲೆ), ಕಲಾವಿದರು, ಕಲಾ ಬೋಧಕರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಕುರಿತು ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಮಾಡುವ ಕುರಿತು ಪರಿಶೀಲನೆಯಲ್ಲಿದೆ.

ಸಂಖ್ಯೆ: ಇಪಿ 115 ಎಲ್ ಬಿಪಿ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು